ಪ್ರಾಧಿಕಾರ ರಚನೆ

247 (416) **ಶ್ರೀ ಮಹದೇವ ಪ್ರಸಾದ ಹೆಚ್. ಎಸ್. (ಗುಂಡ್ಲುಪೇಟೆ):**– ಮಾನ್ಯ ಮುಜರಾಯಿ ಹಾಗೂ ಬಂದರು, ಒಳನಾಡು ಜಲಸಾರಿಗೆ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಲೈಮಹದೇಶ್ವರ ಬೆಟ್ಟದ ಆಡಳಿತ ವ್ಯವಸ್ಥೆ ಸುಗಮವಾಗಿ ನಡೆಯಲು ಅಭಿವೃದ್ಧಿ ಪ್ರಾಧಿಕಾರ ರಚನೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಪ್ರಾಧಿಕಾರ ರಚನೆ ಮಾಡಲು ಸರ್ಕಾರ ಈವರೆವಿಗೆ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

ಶ್ರೀ ಕೋಟಾ ಶ್ರೀನಿವಾಸ (ಮುಜರಾಯಿ ಹಾಗೂ ಬಂದರು, ಒಳನಾಡು ಜಲಸಾರಿಗೆ ಸಚಿವರು):–

(ಅ) ಹೌದು,

(ಆ) ಸರ್ಕಾರದ ಪರಿಶೀಲನೆಯಲ್ಲಿದೆ

ಬಾಲಕಿಯರ ಪದವಿ ಪೂರ್ವ ಕಾಲೇಜು ಮಂಜೂರಾತಿ

260 (882) **ಶ್ರೀ ನರಸಿಂಹಸ್ವಾಮಿ ಜೆ. (ದೊಡ್ಡಬಳ್ಳಾಪುರ):**– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದೊಡ್ಡಬಳ್ಳಾಪುರ ನಗರದಲ್ಲಿ ಬಾಲಕಿಯರ ಪದವಿ ಪೂರ್ವ ಕಾಲೇಜು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಯಾವಾಗ ಮಂಜೂರು ಮಾಡಲಾಗುವುದು; ಮಂಜೂರು ಮಾಡಲು ಈವರೆವಿಗೂ ತೆಗೆದುಕೊಂಡಿರುವ ಕ್ರಮಗಳೇನು;

(ಆ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ವಿದ್ಯಾರ್ಥಿ ವಿದ್ಯಾರ್ಥಿನಿಯರ ಸಂಖ್ಯೆ ಹೆಚ್ಚುತ್ತಿದ್ದು ಪ್ರೌಢಶಾಲೆಗಳಿಗೆ ಬೇಡಿಕೆ ಹೆಚ್ಚಿರುವುದರಿಂದ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ತೊಂದರೆ ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಗ್ರಾಮೀಣ ಪ್ರದೇಶದ ಯಾವ ಸ್ಥಳದಲ್ಲಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಂಡಿದೆ; ಯಾವ ಸಾಲಿನಿಂದ ಪ್ರೌಢಶಾಲೆಗಳನ್ನು ಪ್ರಾರಂಭಿಸಲಾಗುವುದು (ಮಾಹಿತಿ ನೀಡುವುದು);

ಇ) ದೊಡ್ಡಬಳ್ಳಾಪುರ ತಾಲ್ಲೂಕಿನ ಹೊಸಹಳ್ಳಿ, ರಾಜಘಟ್ಟ, ಹುಲಿಕುಂಟೆ, ದೊಡ್ಡಬಳ್ಳಾಪುರ ನಗರಗಳಿಗೆ ಪದವಿ ಪೂರ್ವ ಕಾಲೇಜುಗಳು ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಈ ಬಗ್ಗೆ ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ; ಯಾವಾಗ ಮಂಜೂರಾತಿ ನೀಡಲಾಗುವುದು.

ಶ್ರೀ ವಿಶ್ವೇಶ್ವರ ಹೆಗೆಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

(ಅ) ಬಾಲಕಿಯರ ಪದವಿ ಪೂರ್ವ ಕಾಲೇಜು ಮಂಜೂರಾತಿಗಾಗಿ ಪ್ರಸ್ತಾವನೆ ಬಂದಿದೆ. ಅನುದಾನ ಲಭ್ಯತೆಯನ್ನು ಆಧರಿಸಿ, ಸ್ಥಳೀಯ ಅಗತ್ಯತೆಗಳನ್ನು ಪರಿಗಣಿಸಿ, ಮಂಜೂರು ಮಾಡಲು ಕ್ರಮಕೈಗೊಳ್ಳಲಾಗುವುದು.

(ಆ) ಹೌದು, 2012–13ನೇ ಸಾಲಿನಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಎಸ್.ಎಸ್.ಘಾಟಿ, ಶಿರವಾರ ಮತ್ತು ಉರ್ದು ಪ್ರೌಢಶಾಲೆ ದೊಡ್ಡಬಳ್ಳಾಪುರ ಟೌನ್ ಈ ಸ್ಥಳಗಳಲ್ಲಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಪ್ರಸ್ತಾವನೆ ಬಂದಿರುತ್ತವೆ. ಎಂ.ಹೆಚ್.ಆರ್.ಡಿ. ಯಿಂದ ಅನುಮೋದನೆಯಾದಲ್ಲಿ 2013–14ನೇ ಸಾಲಿನಲ್ಲಿ ಈ ಪ್ರೌಢಶಾಲೆಗಳನ್ನು ಪ್ರಾರಂಭಿಸಲಾಗುವುದು.

(ಇ) ಹೌದು, ಪ್ರಸ್ತಾವನೆ ಬಂದಲ್ಲಿ, ಅನುದಾನ ಲಭ್ಯತೆಯನ್ನು ಆಧರಿಸಿ, ಸ್ಥಳೀಯ ಅಗತ್ಯತೆಗಳನ್ನು ಪರಿಗಣಿಸಿ, ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದು.

ಶಾಲಾ ಕಾಲೇಜುಗಳ ಬಳಿ ತಂಬಾಕು ನಿಯಂತ್ರಿಸುವುದು

277 (175) **ಶ್ರೀ ರಾಮಲಿಂಗಾರೆಡ್ಡಿ (ಬಿ.ಟಿ.ಎಂ. ಲೇ–ಔಟ್):–** ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅದರಲ್ಲೂ ಹೆಚ್ಚಾಗಿ ಬೆಂಗಳೂರು ನಗರದಲ್ಲಿನ ಶಾಲಾ ಕಾಲೇಜುಗಳ ಬಳಿ ತಂಬಾಕು ಹಾಗೂ ಮಾದಕ ದ್ರವ್ಯಗಳ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದರಿಂದ ಶಾಲಾ ವಿದ್ಯಾರ್ಥಿಗಳು ಈ ಮಾದಕ ದ್ರವ್ಯಗಳ ದಾಸರಾಗುತ್ತಿರುವುದು ನಿಜವೇ;

(ಇ) ಹಾಗಿದ್ದಲ್ಲಿ, ಶಾಲಾ ಕಾಲೇಜುಗಳ ಬಳಿ ತಂಬಾಕು ಮಾರಾಟವನ್ನು ನಿಯಂತ್ರಿಸಲು ಸರ್ಕಾರ ಕ್ರಮ ಕೈಗೊಳ್ಳಲಿದೆಯೇ?